ದಿನಾಂಕಃ 17.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟೀ ಸವಾಲುಃವಾದಿ ಪರ ವಕೀಲರಿಂದಃ**

ನಾನು ಪಿ.ಯು.ಸಿ ವರೆಗೆ ವಿಧ್ಯಾಭ್ಯಾಸವನ್ನು ಮಾಡಿದ್ದೇನೆ. ದಾವಾ ಸ್ವತ್ತಿನ 200 ಮೀಟರ್ ದೂರದಲ್ಲಿ ನನ್ನ ನಿವೇಶನ ಇರುತ್ತದೆ. ದಾವಾ ಸ್ವತ್ತು ದೇವೀರಮ್ಮ ರವರಿಗೆ ಸೇರಿದ್ದು. ದಾವಾ ಸ್ವತ್ತಿನ ಅಸೆಸ್ಮೆಂಟ್ ನಂಬರ್ ಹಾಗೂ ವಿಸ್ತೀರ್ಣ ನನಗೆ ಗೊತ್ತಿಲ್ಲ. ನನಗೆ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿ ಅನುಭವ ಇದೆ ಎಂದರೆ ಸರಿ. ಸುಮಾರು 2 ರಿಂದ 3 ದಾವೆಗಳಲ್ಲಿ ನಾನು ಸಾಕ್ಷಿ ನುಡಿದಿದ್ದೇನೆ ಎಂದರೆ ಸರಿ. OS.106/2022 ರಲ್ಲಿ ನಾನು ರಾಮಚಂದ್ರಪ್ಪ ರವರ ಪರ ಸಾಕ್ಷಿ ಹೇಳಿದ್ದೇನೆ ಎಂದರೆ ಸರಿ. ನಂಜುಂಡಪ್ಪ ರವರಿಂದ ಪ್ರತಿವಾದಿಗೆ ದಾವಾ ಸ್ವತ್ತು ಪಾವತಿ ವಾರಸಿನ ಮೇಲೆ ಬಂದಿರುತ್ತದೆ ಹಾಗೂ ಅದರ ದಾಖಲಾತಿಗಳನ್ನು ನಾನು ನೋಡಿರುತ್ತೇನೆ. ದಾವಾ ಸ್ವತ್ತಿನ ಮೇಲೆ ಪ್ರತಿವಾದಿಗೆ ಯಾವುದೇ ಹಕ್ಕು ಅಥವಾ ಸ್ವಾಧೀನ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ದಾವಾ ಸ್ವತ್ತಿನಲ್ಲಿ ಪ್ರತಿವಾದಿ ಸ್ವಾಧೀನದಲ್ಲಿ ಇದ್ದಾರೆ ಎಂದು ನುಡಿದಿರುತ್ತಾರೆ. ನಿಪಿ-6 ರಲ್ಲಿ ಕಟ್ಟಡಗಳ ನಡುವೆ ಯಾವುದೇ ಜಾಗವನ್ನು ಬಿಟ್ಟಿಲ್ಲ ಎಂದರೆ ಸಾಕ್ಷಿಯು ವಾದಿ ಮತ್ತು ಪ್ರತಿವಾದಿಗಳು ಇಬ್ಬರೂ ಬಿಟ್ಟಿರುವುದಿಲ್ಲ ಎಂದು ನುಡಿದಿರುತ್ತಾರೆ. ವಾದಿಯ ಮನೆಯ ದಕ್ಷಿಣಕ್ಕೆ ಪ್ರತಿವಾದಿಯ ಮನೆ ಕಟ್ಟುತಿದ್ದಾರೆ ಎಂದರೆ ಸರಿ. ಸದರಿ ಮನೆ ಕಟ್ಟಡದಿಂದ ವಾದಿಗೆ ಗಾಳಿ ಬೆಳಕಿನ ತೊಂದರೆಯಾಗುತ್ತದೆ ಎಂದರೆ ಸರಿಯಲ್ಲ. ದಾವಾ ಸ್ವತ್ತನ್ನು ವಾದಿಯು ಕ್ರಯಕ್ಕೆ ಕೊಂಡುಕೊಂಡರು ಎಂದರೆ ಸಾಕ್ಷಿಯು ವಿಭಾಗದಲ್ಲಿ ಬಂದಿರುತ್ತದೆ ಎಂದು ನಾನು ಕೇಳಿರುತ್ತೇನೆ ಎಂದು ನುಡಿದಿರುತ್ತಾರೆ. ದಾವಾ ಸ್ವತ್ತಿನಲ್ಲಿ ವಾದಿಗೆ ಹಕ್ಕು ಮತ್ತು ಸ್ವಾಧೀನ ಇದೆ ಎಂದರೆ ಸರಿಯಲ್ಲ. ವಾದಿಯು ತುಮಕೂರಿನಲ್ಲಿ ವಾಸವಿದ್ದ ಕಾರಣ ಪ್ರತಿವಾದಿಯು ಅಕ್ರಮವಾಗಿ ದಾವಾ ಸ್ವತ್ತಿನಲ್ಲಿ ಮನೆ ಕಟ್ಟುತಿದ್ದಾರೆ ಎಂದರೆ ಸರಿಯಲ್ಲ. ಸದರಿ ಮನೆಯನ್ನು ಮೇಲ್ಚಾವಣಿಯ ವರೆಗೆ ಕಟ್ಟಿಸಿ ನಿಲ್ಲಿಸಲಾಯಿತು. ಪ್ರತಿವಾದಿಗೂ ನನಗೂ ಬಹಳ ವಿಶ್ವಾಸ ಇದೆ ಎಂದರೆ ಸರಿಯಲ್ಲ. ಆದ್ದರಿಂದ ನಾನು ಸುಳ್ಳು ಸಾಕ್ಷಿ ನುಡಿಯುತಿದ್ದೇನೆ ಎಂದರೆ ಸರಿಯಲ್ಲ. ನನ್ನ ಪ್ರಮಾಣ ಪತ್ರದಲ್ಲಿ ಇರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗಳಿಸಿ ಪ್ರಿಂಟ್ ತೆಗೆಯಲಾಯಿತು.

ಓ.ಹೇ.ಕೇ.ಸರಿ.ಇದೆ.

ಸಹಿ/-

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,

ಶಿರಾ.